ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉ ನಿ : ಸುಮಪ : 2016-17 ದಿನಾಂಕ: 02-08-2016

## ಪತ್ರಿಕಾ ಪ್ರಕಟಣೆ

# ತರಬೇತಿ ಶಿಬಿರಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 2 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳುರು ನಗರ ಜಿಲ್ಲೆಯ ವತಿಯಿಂದ ಗಿರಿಜನ ಉಪಯೊಜನೆಯಡಿ (ಪರಿಶಿಷ್ಟ ಪಂಗಡ) ಗುರುಶಿಷ್ಯ ಪರಂಪರೆಯ ಕಾರ್ಯಕ್ರಮದ ಅಡಿಯಲ್ಲಿ 6 ತಿಂಗಳು ಕಾಲ"ಪಟಕುಣಿತ/ಕಂಸಾಳೆ ತರಬೇತಿ ಶಿಬಿರವನ್ನು ಏರ್ಪಡಿಸುವ ಯೋಜನೆಯನ್ನು ಹಮ್ಮಿಕೊಂಡಿದೆ. ಕಲಿಕಾ ಆಸಕ್ತ ಅಭ್ಯರ್ಥಿಗಳು ಕನಿಷ್ಟ 5ನೇ ತರಗತಿ ಪಾಸಾಗಿರಬೇಕು ಹಾಗೂ ಕನಿಷ್ಟ 12 ರಿಂದ ಗರಿಷ್ಟ 28 ವರ್ಷದ ವಯಸ್ಸಿನೊಳಗಿನವರಾಗಿರಬೇಕು. ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ನಗರ ಜಿಲ್ಲೆ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 02, ಇವರಿಗೆ ಸಲ್ಲಿಸಲು ಆಗಸ್ಟ್ 16 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 080–22119901 ಸಂಪರ್ಕಿಸಬಹುದು.

ಬಾಬು:ಜಿಪಿಆರ್.

# ಸಾಕ್ಷ್ಯಚಿತ್ರ ತಯಾರಿಕೆಗೆ ಅರ್ಜಿ ಆಹ್ವಾನ

ಬೆಂಗಳೂರು, ಆಗಸ್ಟ್ 2 (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ನಗರ ಜಿಲ್ಲೆಯ ವತಿಯಿಂದ ವಿಶೇಷ ಘಟಕ ಯೋಜನೆಯಡಿ (ಅನುಸೂಚಿತ ಜಾತಿ) ನಾಡಿನ ಸಾಹಿತ್ಯ, ಸಂಸ್ಕೃತಿ, ನಾಟಕ, ಜಾನಪದ, ಸಂಗೀತ, ಯಕ್ಷಗಾನ, ಬಯಲಾಟ, ದೊಡ್ಡಾಟ, ಚಿತ್ರಕಲೆ, ಶಿಲ್ಪಕಲೆ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದ ಹಿರಿಯ ಕಲಾವಿದರ/ಸಾಹಿತಿಗಳ ಸಾಕ್ಷ್ಯಚಿತ್ರ ತಯಾರಿಸುವ ಯೋಜನೆಯನ್ನು ಹಮ್ಮಿಕೊಂಡಿದೆ. ಆಸಕ್ತ ಅಭ್ಯರ್ಥಿಗಳು ಅರ್ಜಿಯನ್ನು ಖುದ್ದಾಗಿ ಅಥವಾ ಅಂಚೆ ಮೂಲಕ ಸಹಾಯಕ ನಿರ್ದೇಶಕರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ನಗರ ಜಿಲ್ಲೆ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು – 02, ಇವರಿಗೆ ಸಲ್ಲಿಸಲು ಆಗಸ್ಟ್ 16 ಕೊನೆಯ ದಿನವಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯ ದೂರವಾಣಿ ಸಂಖ್ಯೆ 080–22119901 ಸಂಪರ್ಕಿಸಬಹುದು.

ಬಾಬು:ಜಿಪಿಆರ್.

# ಕಳ್ಳಭಟ್ಟಿ ಜಾಲಕ್ಕೆ ಕಡಿವಾಣ

ಬೆಂಗಳೂರು, ಆಗಸ್ಟ್ 2 (ಕರ್ನಾಟಕ ವಾರ್ತೆ)

ರಾಜ್ಯದ ಕೆಲವು ಜಿಲ್ಲೆಗಳಲ್ಲಿ ನಡೆಯುತ್ತಿರುವ ಕಳ್ಳಭಟ್ಟಿ ಜಾಲಕ್ಕೆ ಕಡಿವಾಣ ಹಾಕಲಾಗುವುದು ಎಂದು ಅಬಕಾರಿ ಸಚಿವ ಹೆಚ್. ವೈ ಮೇಟಿ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಇಂದು ತಮ್ಮನ್ನು ಭೇಟಿಮಾಡಿದ ಪತ್ರಕರ್ತರನ್ನುದ್ದೇಶಿಸಿ ಮಾತನಾಡಿದ ಸಚಿವರು ದಕ್ಷಿಣ ಕರ್ನಾಟಕದಲ್ಲಿ ಕಳ್ಳಭಟ್ಟಿ ಜಾಲ ಇಲ್ಲ. ಉತ್ತರ ಕರ್ನಾಟಕದ ಕೆಲವು ಜಿಲ್ಲೆಗಳಲ್ಲಿ ಮಾತ್ರ ಈ ಕಳ್ಳಭಟ್ಟಿ ಜಾಲಗಳು ಇವೆ. ಅವುಗಳನ್ನು ನಿರ್ಮೂಲನೆ ಮಾಡಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದರು.

ಹೊಸ ಬಾರ್‌ಗಳನ್ನು ತೆರೆಯಲು ಲೈಸೆನ್ಸ್ ಕೂಡುವ ಬಗ್ಗೆ ಯಾವುದೇ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ. ಕುಡಿಯುವುದು ಆರೋಗ್ಯಕ್ಕೆ ಹಾನಿಕಾರಕ, ಮಾರಾಟದ ವಿಷಯದಲ್ಲಿ ಇಲಾಖೆಯಲ್ಲಿ ಗುರಿ ನಿಗದಿಪಡಿಸಿಲ್ಲ ಎಂದು ತಿಳಿಸಿದರು.

ಅಕ್ರಮ ಮದ್ಯ ಮಾರಾಟ ಹಾಗೂ ತಡೆಗಟ್ಟುವ ಬಗ್ಗೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಮದ್ಯ ಮಾರಾಟ, ಧರಪಟ್ಟಿ ಪ್ರಕಟಿಸುವುದು ಸೇರಿದಂತೆ ಇಲಾಖೆಯ ಇತರೆ ವಿಷಯಗಳನ್ನು ಚರ್ಚಿಸುವ ಸಲುವಾಗಿ ಈ ವಾರದಲ್ಲಿ ಇಲಾಖೆ ಹಿರಿಯ ಅಧಿಕಾರಿಗಳ ಸಭೆಯನ್ನು ಕರೆಯಲಾಗಿದೆ ಎಂದರು.

ಬಾಬು:ಕೆಪಿಪಿ:ಜಿಪಿಆರ್.

# ಬಗರ್‌ಹುಕುಂ ಸಾಗುವಳಿದಾರರಿಗೆ
# ಹಕ್ಕುಪತ್ರ ವಿತರಿಸಲು ಸೂಚನೆ

ಬೆಂಗಳೂರು, ಆಗಸ್ಟ್ 2 (ಕರ್ನಾಟಕ ವಾರ್ತೆ)

ಬಗರ್‌ಹುಕುಂ ಸಾಗುವಳಿದಾರರಿಗೆ ತಕ್ಷಣವೇ ಹಕ್ಕುಪತ್ರ ವಿತರಿಸುವಂತೆ ಈಗಾಗಲೇ ಸೂಚನೆ ನೀಡಲಾಗಿದೆ ಎಂದು ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ಅವರು ತಿಳಿಸಿದರು.

ವಿಧಾನಸೌಧದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು ರಾಜ್ಯದ ಕೆಲವು ಭಾಗಗಳಲ್ಲಿ ಮಳೆ ನಿರೀಕ್ಷಿತ ಪ್ರಮಾಣದಲ್ಲಿ ಆಗಿಲ್ಲ. ಬಹುತೇಕ ಕೆರೆಗಳೂ ಮತ್ತು ಜಲಾಶಯಗಳು ಭರ್ತಿಯಾಗಿಲ್ಲ ಎಂದು ಕಂದಾಯ ಸಚಿವರು ಮಾತನಾಡಿದರು.

ಮಳೆ ಬಿತ್ತನೆ ಕಾರ್ಯದ ಬಗ್ಗೆ ಚಿಂತನೆ ನಡೆದಿದೆ. ಈ ಬಗ್ಗೆ ಇಲಾಖೆಯಿಂದ ವರದಿ ನೀಡುವಂತೆ ಕೇಳಲಾಗಿದೆ. ವರದಿ ಬಂದ ನಂತರ ಅಂತಿಮ ತೀರ್ಮಾನ ತೆಗೆದು ಕೊಳ್ಳಲಾಗುವುದು ಎಂದರು.

ಮಹಾದಾಯಿ ನೀರಿನ ವಿಷಯಕ್ಕೆ ಸಂಬಂಧಿಸಿದಂತೆ ದೇಶದ ಪ್ರಧಾನ ಮಂತ್ರಿಗಳು ಮಧ್ಯಸ್ಥಿಕೆವಹಿಸಿ ಮೂರು ರಾಜ್ಯಗಳ ಮುಖ್ಯಮಂತ್ರಿಗಳು ಹಾಗೂ ಸಂಬಂಧಿಸಿದವರನ್ನು ಕರೆಸಿ ಚರ್ಚಿಸಿ ರಾಜ್ಯಕ್ಕೆ ಬೇಕಾಗಿರುವ ಕುಡಿಯುವ ನೀರನ್ನು ಒದಗಿಸುವ ಪ್ರಯತ್ನ ಮಾಡಬೇಕು.

ಮೌಢ್ಯ ನಿಷೇಧ ಕಾಯ್ದೆ ರೂಪಿಸಲು ರಚಿಸಿರುವ ಸಚಿವ ಸಂಪುಟದ ಉಪ ಸಮಿತಿಯ ಸಭೆಯನ್ನು ಈ ತಿಂಗಳಲ್ಲಿ ನಡೆಸಲಾಗುವುದು. ಮೌಢ್ಯಕ್ಕೆ ವಿದ್ಯಾವಂತರೆ ಹೆಚ್ಚಾಗಿ ಶರಣಾಗುತ್ತಿದ್ದಾರೆ. ಹೀಗಾಗಿ ರಾಜ್ಯ ಹಾಗೂ ದೇಶದಲ್ಲಿ ಮೌಢ್ಯ ನಿವಾರಣೆ ಸುಲಭದ ಕೆಲಸವಲ್ಲ. ಜನರಲ್ಲಿ ಮೌಢ್ಯದ ವಿಷಯವಾಗಿ ಜಾಗೃತಿ ಮೂಡಿಸಬೇಕಾಗಿದೆ ಎಂದು ಕಂದಾಯ ಸಚಿವ ಕಾಗೋಡು ತಿಮ್ಮಪ್ಪ ತಿಳಿಸಿದರು.

ಬಾಬು:ಕೆಪಿಪಿ:ಜಿಪಿಆರ್.